ರಾಜ್ಯದಲ್ಲಿ ಸಣ್ಣ ಪ್ರಮಾಣದ ಕೈಗಾರಿಕೆಗಳಿಗೆ ಸಹಾಯಧನ ಬಿಡುಗಡೆ ಬಗ್ಗೆ.

2003(2641)

ಶ್ರೀ ಕೆ.ಎನ್.ಸುಬ್ಬಾರೆಡ್ಡಿ(ಬಸವನಗುಡಿ): ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1999ರಿಂದ 2001 ಜೂನ್‌ವರೆಗೆ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಿಂದ ಸಣ್ಣ ಪ್ರಮಾಣದ ಕೈಗಾರಿಕೆಗಳಿಗೆ ನೀಡಿದ ಸಹಾಯಧನವೆಷ್ಟು?

ಆ) ರಾಜ್ಯದಲ್ಲಿ ಸಣ್ಣ ಪ್ರಮಾಣದ ಕೈಗಾರಿಕೆ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎಸ್.ಆರ್.ಕಾಶಪ್ಪನವರ್ (ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು)

ಅ) 1-4-1999ರಿಂದ 2001 ಜೂನ್‌ರವರೆಗೆ ರೂ.140.13 ಕೋಟಿಗಳ ಸಹಾಯಧನವನ್ನು ಸಣ್ಣ ಪ್ರಮಾಣದ ಕೈಗಾರಿಕೆಗಳಿಗೆ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಿಂದ ಬಿಡುಗಡೆ ಮಾಡಲಾಗಿದೆ.

ಆ) ಬಂದಿದೆ. ಮುಖ್ಯಕಾರಣಗಳು - ಉದಾರೀಕರಣ, ಜಾಗತೀಕರಣ ಮತ್ತು ಕೈಗಾರಿಕಾ ಹಿಂಜರಿತ.

ಇ) ಸಣ್ಣ ಕೈಗಾರಿಕೆಗಳ ಕುಸಿತವನ್ನು ತಡೆಗಟ್ಟಲು ಸರ್ಕಾರವು ಅನೇಕ ಯೋಜನೆಗಳನ್ನು ರೂಪಿಸಿದೆ.

1. ರಾಜ್ಯದ ಹೊಸ ಕೈಗಾರಿಕಾ ನೀತಿಯನ್ನು ಘೋಷಿಸಲಾಗಿದೆ. ಅದರಂತೆ ಕೈಗಾರಿಕಾ ವಲಯಗಳನ್ನು ಪುನಃ ವಿಂಗಡಣೆ ಮಾಡಲಾಗಿದೆ. ತಾಂತ್ರಿಕ ಉನ್ನತೀಕರಣಕ್ಕೆ ಉತ್ತೇಜನ ನೀಡಲಾಗಿದೆ. ರೋಗಗ್ರಸ್ತ ಕೈಗಾರಿಕೆಗಳಿಗೆ ಪುನಶ್ಚೇತನಕ್ಕಾಗಿ ನೀಡಲಾಗುವ ಸೌಲಭ್ಯಗಳನ್ನು ಸೇರಿಸಲಾಗಿದೆ. ಮೂಲಭೂತ ಸೌಕರ್ಯಗಳನ್ನು ನೀಡುವ ಬಗ್ಗೆ ಒತ್ತು ನೀಡಲಾಗಿದೆ.

2. WTO ರಿಲೇ ಸೆಂಟರ್‌ನ್ನು ಸ್ಥಾಪಿಸಲಾಗಿದೆ.

3. ಎ ಸ್ಕೀಮ್ ಆಪ್ ಕ್ರೆಡಿಟ್ ಲಿಂಕ್ಡ್ ಕ್ಯಾಪಿಟಲ್ ಸಬ್ಸಿಡಿ ಫಾರ್ ಟೆಕ್ನಾಲಜಿ ಅಪ್‌ಗ್ರೇಡೇಶನ್.

4. ಕ್ರೆಡಿಟ್ ಗ್ಯಾರಂಟಿ ಫಂಡ್‌ಟ್ರಸ್ಟ್ ಫಾರ್ ಸ್ಮಾಲ್ ಸ್ಕೇಲ್ ಇಂಡಸ್ಟ್ರೀಸ್.

5. ಕೈಗಾರಿಕೆಗಳ ಆಧುನೀಕರಣ ಮತ್ತು ತಾಂತ್ರಿಕ ಉನ್ನತೀಕರಣ ನಿಧಿ ಯೋಜನೆ.

6. ರೋಗಗ್ರಸ್ತ ಕೈಗಾರಿಕೆಗಳ ಪುನಃಶ್ಚೇತನಕ್ಕಾಗಿ ನೀಡುವ ಸವಲತ್ತುಗಳನ್ನು ಹೊಸ ಕೈಗಾರಿಕಾ ನೀತಿಯಲ್ಲಿ ಅಳವಡಿಸಲಾಗಿದೆ.

7. ಸಣ್ಣ ಕೈಗಾರಿಕೆಗಳ ಉತ್ಪನ್ನಗಳನ್ನು ಖರೀದಿಸಲು ಪ್ರತ್ಯೇಕ ನೀತಿ, ಇತ್ಯಾದಿಗಳು.

ಚಿಕ್ಕನಾಯಕನಹಳ್ಳಿ ಕ್ಷೇತ್ರದ ಕಾತ್ರಿಕೇಹಾಳ್ ಗ್ರಾಮದಲ್ಲಿ ವಿದ್ಯಾರ್ಥಿನಿಲಯಗಳನ್ನು ತೆರೆಯುವುದು.

2004(2492)

ಶ್ರೀ ಸುರೇಶ್‌ಬಾಬು ಸಿ.ಬಿ.(ಚಿಕ್ಕನಾಯಕನಹಳ್ಳಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರದ ಕಾತ್ರಿಕೇಹಾಳ್ ಗ್ರಾಮದಲ್ಲಿ ಗ್ರಾಮದಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯದ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ ಈ ನಿಟ್ಟಿನಲ್ಲಿ ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ;

ಇ) ಚಿಕ್ಕನಾಯಕನಹಳ್ಳಿ ಕ್ಷೇತ್ರದ ದೊಡ್ಡ ಎಣ್ಣೆಗೆರೆ ಕ್ರಾಸ್ ಮತ್ತು ಕರಡಾಳು ಸಂತೆ ಮೈದಾನ (ಕಿಬ್ಬನಳ್ಳಿ, ಹೋಬಳಿ ತಿಪಟೂರು ತಾಲ್ಲೂಕು) ಗ್ರಾಮಗಳಲ್ಲಿ ಬಿ.ಸಿ.ಎಂ. ಹಾಸ್ಟೆಲ್ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಈ) ಹಾಗಿದ್ದಲ್ಲಿ ಈ ವರ್ಷದ ಕ್ರಿಯಾ ಯೋಜನೆಯಲ್ಲಿ ಸೇರಿಸಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) ಪರಿಶೀಲನೆಯಲ್ಲಿದೆ.